ಪ್ರಾಥಮಿಕ ಆರೋಗ್ಯ ಕೇಂದ್ರ

5090 (5333); ಶ್ರೀ ಚಿಕ್ಕಮಾದು ಎಸ್. (ಹೆಚ್.ಡಿ. ಕೋಟೆ)

ಅ) ಡಾ॥ ನಂಜುಂಡಪ್ಪ ವರದಿಯನ್ವಯ ಹೆಚ್.ಡಿ.ಕೋಟೆ ಅತ್ಯಂತ ಹಿಂದುಳಿದ ತಾಲ್ಲೂಕಾಗಿದ್ದು, ಹೆಚ್ಚಿನ ಸಂಖ್ಯೆಯ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಗಿರಿಜನರು ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಕಬಿನಿ ಜಲಾಶಯವಿರುವ ಬೀಚನಹಳ್ಳಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವು ಕಬಿನಿ ಜಲಾಶಯ ನಿರ್ಮಾಣದ ಸಂದರ್ಭದಲ್ಲಿ ಇದ್ದು, ನಂತರ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮುಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮವೇನು (ಮಾಹಿತಿ ನೀಡುವುದು)?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ.

ಆ) ಬಂದಿದೆ.

ಕಬಿನಿ ಜಲಾಶಯ ನಿರ್ಮಾಣದ ಸಮಯದಲ್ಲಿ ನೀರಾವರಿ ಇಲಾಖೆಯ ವತಿಯಿಂದ ಬೀಚನಹಳ್ಳಿಯಲ್ಲಿ ಆಸ್ಪತ್ರೆಯನ್ನು ನಿರ್ಮಿಸಿದ್ದು, ಜಲಾಶಯ ನಿರ್ಮಾಣ ಮುಗಿದ ನಂತರ ನಿರಾವರಿ ಇಲಾಖೆಯವರು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮುಚ್ಚಿರುತ್ತಾರೆ. ಸದರಿ ಕೇಂದ್ರವು ಆರೋಗ್ಯ ಇಲಾಖೆಯ ವ್ಯಾಪ್ತಿಗೆ ಬರುವುದಿಲ್ಲ.

ಇ) ಉದ್ಭವಿಸುವುದಿಲ್ಲ